ಆಗಸ್ಟ್ - 2020

ಸ್ವಚ್ಛ ಭಾರತ
ಒಂದು ಹೆಜ್ಜೆ ಸ್ವಚ್ಛತೆಯ ಕಡೆಗೆ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

# ಸ್ವಚ್ಛತಾವಾಣಿ

ವಾರ್ತಾಪತ್ರ

ಸ್ವಚ್ಛಮೇವ ಜಯತೇ SWACHHA MEVA JAYATE

## ಗಂದಗಿ ಮುಕ್ತ ಭಾರತ

ಗ್ರಾಮೀಣ ಜನರಲ್ಲಿ ಸುಸ್ಥಿರ ನೈರ್ಮಲ್ಯದ ಅಭ್ಯಾಸಗಳನ್ನು ರೂಡಿಸುವ ನಿಟ್ಟಿನಲ್ಲಿ ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಮತ್ತು ಜಲಶಕ್ತಿ ಮಿಷನ್ ಭಾರತ ಸರ್ಕಾರ, ಸ್ವಚ್ಛ ಭಾರತ್ ಮಿಷನ್(ಗ್ರಾ) ಯೋಜನೆಯಡಿ ದಿನಾಂಕ: 08/08/2020 ರಿಂದ 15/08/2020 ರವರೆಗೆ ಒಂದು ವಾರಗಳ ಕಾಲ **"ಗಂದಗಿ ಮುಕ್ತ ಭಾರತ"** ಆಂದೋಲನವನ್ನು ಆಯೋಜಿಸಲು ಸೂಚಿಸಲಾಗಿತ್ತು.




ಇದರನ್ವಯ ಆಂದೋಲನದ ಅವಧಿಯಲ್ಲಿ ಗ್ರಾಮೀಣ ಜನರಲ್ಲಿ ಉತ್ತಮ ನೈರ್ಮಲ್ಯ ಅಭ್ಯಾಸಗಳನ್ನು ರೂಢಿಸಲು ಪೂರಕವಾದ ವಿವಿಧ **IEC** ಚಟುವಟಿಕೆಗಳನ್ನು ಹಮ್ಮಿಕೊಳ್ಳವಂತೆ ಜಿಲ್ಲೆ, ತಾಲ್ಲೂಕು ಮತ್ತು ಗ್ರಾಮ ಪಂಚಾಯತಿಗಳಿಗೆ ಸೂಚಿಸಲಾಯಿತು. ಇದರ ಪರಿಣಾಮ ರಾಜ್ಯದ ಎಲ್ಲಾ ಜಿಲ್ಲೆಗಳು ಗ್ರಾಮ ಮಟ್ಟದಲ್ಲಿ ಶ್ರಮದಾನ ಮತ್ತು ಸ್ವಚ್ಛತಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಆಂದೋಲನವನ್ನು ಯಶಸ್ವಿಯಾಗಿ ನಡೆಸಲಾಯಿತು. ಜೊತೆಗೆ ಆಂದೋಲನದ ಮಾಹಿತಿಯನ್ನು IMIS ನಲ್ಲಿ ನಮೂದಿಸಲಾಯಿತು.

## IEC/HRD/SH ಚಟುವಟಿಕೆಗಳ ಪ್ರಗತಿ ಪರಿಶೀಲನಾ ಸಭೆ

ಸ್ವಚ್ಛ ಭಾರತ ಮಿಷನ್(ಗ್ರಾ) ಮತ್ತು ಗ್ರಾಮೀಣ ಕುಡಿಯುವ ನೀರು ಯೋಜನೆಗಳ ಕುರಿತು ಗ್ರಾಮೀಣ ಜನರಿಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಪ್ರತಿ ಮಾಹೆಯಲ್ಲಿ ವಿಶೇಷ ಅಭಿಯಾನ/ಜಾಗೃತಿ ಸಪ್ತಾಹಗಳನ್ನು ಕಾಲಕಾಲಕ್ಕೆ ಹಮ್ಮಿಕೊಳ್ಳಲಾಗುತ್ತಿದೆ. ಈ ಕಾರ್ಯಕ್ರಮಗಳ ಕುರಿತು **IEC/HRD/SH** ಚಟುವಟಿಕೆಗಳು, ಗ್ರಾಮೀಣ ಪ್ರದೇಶದ ಜನರನ್ನು ತಲುಪುವಲ್ಲಿ ಎಷ್ಟರ ಮಟ್ಟಿಗೆ ಪರಿಣಾಮಕಾರಿಯಾಗಿವೆ ಎಂಬುದರ ಕುರಿತು ದಿನಾಂಕ: 12/08/2020 ರಂದು ಎಲ್ಲಾ ಜಿಲ್ಲೆಗಳ **IEC/HRD/SH** ಸಮಾಲೋಚಕರುಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆಯನ್ನು ನಿರ್ದೇಶಕರು(**ISA**) ರವರ ನೇತೃತ್ವದಲ್ಲಿ ನಡೆಸಲಾಯಿತು.



## ಘನ ತ್ಯಾಜ್ಯ ನಿರ್ವಹಣಾ ಘಟಕ

ಗ್ರಾಮೀಣ ಪ್ರದೇಶಗಳಲ್ಲಿನ ಸಂಪೂರ್ಣ ಸ್ವಚ್ಛತೆಯನ್ನು ಸಾಧಿಸುವ ಉದ್ದೇಶದೊಂದಿಗೆ ಘನ ಹಾಗೂ ದ್ರವ ತ್ಯಾಜ್ಯಗಳ ನಿರ್ವಹಣೆಗೆ ಹೆಚ್ಚಿನ ಮಹತ್ವ ನೀಡಲಾಗುತ್ತಿದೆ. ದಿನಾಂಕ 01/04/2012 ರಿಂದ ಅನ್ವಯವಾಗುವಂತೆ ಕೇಂದ್ರ ಸರ್ಕಾರವು ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣಾ ಘಟಕಕ್ಕೆ ಕುಟುಂಬಗಳ ಆಧಾರದ ಮೇಲೆ 5000 ಕ್ಕಿಂತ ಹೆಚ್ಚು ಜನಸಂಖ್ಯೆ ಇರುವ ಗ್ರಾಮ ಪಂಚಾಯತಿಗಳಲ್ಲಿ ತಲಾ ರೂ.45ಗಳನ್ನು, 5000 ಕ್ಕಿಂತ ಕಡಿಮೆ ಜನಸಂಖ್ಯೆ ಇರುವ ಗ್ರಾಮ ಪಂಚಾಯತಿಗಳಿಗೆ ತಲಾ ರೂ.60ಗಳನ್ನು ಘನತ್ಯಾಜ್ಯ ವಿಲೇವಾರಿ ಘಟಕ ನಿರ್ಮಾಣಕ್ಕೆ ಅನುದಾನ ನೀಡಲಾಗುತ್ತಿದೆ. ಅಂತೆಯೇ ದ್ರವ ತ್ಯಾಜ್ಯ ವಿಲೇವಾರಿಗೆ 5000 ಕ್ಕಿಂತ ಹೆಚ್ಚಿನ ಜನಸಂಖ್ಯೆ ಇರುವ ಗ್ರಾಮ ಪಂಚಾಯತಿಗಳಿಗೆ ತಲಾ ರೂ.660ಗಳನ್ನು, 5000 ಕ್ಕಿಂತ ಕಡಿಮೆ ಜನಸಂಖ್ಯೆ ಇರುವ ಗ್ರಾಮ ಪಂಚಾಯತಿಗೆ ತಲಾ ರೂ.280 ರಂತೆ ದ್ರವ ತ್ಯಾಜ್ಯ ನಿರ್ವಹಣಾ ಘಟಕ ನಿರ್ಮಾಣಕ್ಕೆ ಅನುದಾನ ನೀಡಲಾಗುತ್ತಿದೆ. ಇದರ ಅನುಪಾತವು 60:40 ಇದ್ದು, ಈ ಪೈಕಿ ಶೇಕಡಾ 60% ರಷ್ಟನ್ನು ಸ್ವಚ್ಛ ಭಾರತ್ ಮಿಷನ್(ಗ್ರಾ) ಬರಿಸುತ್ತದೆ. ಇನ್ನುಳಿದ ಶೇಕಡಾ 40% ರಷ್ಟನ್ನು ಆಯಾ ರಾಜ್ಯ ಸರ್ಕಾರಗಳು ಭರಿಸಲಿವೆ. ಇದನ್ನು ಹೊರತುಪಡಿಸಿ 15ನೇ ಹಣಕಾಸು ಆಯೋಗದ ಅನುದಾನವನ್ನು ಬಳಸಿಕೊಳ್ಳಬಹುದಾಗಿದೆ.



ಸ್ವಚ್ಛ ಭಾರತ್ ಮಿಷನ್(ಗ್ರಾ) ಯೋಜನೆಯಡಿ ಪ್ರಸ್ತುತ ರಾಜ್ಯದಲ್ಲಿ 6010 ಗ್ರಾಮಗಳಲ್ಲಿ ಘನತ್ಯಾಜ್ಯ ನಿರ್ವಹಣಾ ಘಟಕಗಳನ್ನು ಸ್ಥಾಪಿಸುವ ಗುರಿ ಹೊಂದಲಾಗಿದೆ. ಈ ಪೈಕಿ 2408 ವಿಸ್ತೃತ ಯೋಜನಾ ವರದಿಗಳನ್ನು ಸ್ವೀಕರಿಸಲಾಗಿದ್ದು, ಇವುಗಳಲ್ಲಿ 1791 ವರದಿಗಳಿಗೆ ಅನುಮೋದನೆ ನೀಡಲಾಗಿದೆ. ಇವುಗಳಲ್ಲಿ ಈಗಾಗಲೇ 155 ಘಟಕಗಳ ನಿರ್ಮಾಣ ಕಾಮಗಾರಿ ಪೂರ್ಣಗೊಂಡಿದೆ. ಇನ್ನು 416 ಘಟಕಗಳು ಕಾರ್ಯ ನಿರ್ವಹಿಸುತ್ತಿದ್ದು, ತಮ್ಮ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ಕಸ ಸಂಗ್ರಹಣೆ ಮತ್ತು ಸಮರ್ಪಕ ವಿಲೇವಾರಿ ಕಾರ್ಯವನ್ನು ಆರಂಭಿಸಿವೆ.

## ತರಬೇತಿ ಕಾರ್ಯಕ್ರಮಗಳು

ಜಲಜೀವನ್ ಮಿಷನ್(**JJM**) ಯೋಜನೆಯ ಮಾರ್ಗಸೂಚಿ, ಕಾರ್ಯಕ್ರಮಗಳ ವಿವರ, ಅನುಷ್ಠಾನ ಮತ್ತು ಅನುಷ್ಠಾನ ಬೆಂಬಲ ಸಂಸ್ಥೆಗಳ(**ISA**) ಕರ್ತವ್ಯ ಮತ್ತು ಜವಾಬ್ದಾರಿಗಳು ಇತ್ಯಾದಿಗಳ ಕುರಿತಂತೆ Video Conference ಮೂಲಕ ಒಂದು ದಿನದ Online ತರಬೇತಿಯನ್ನು ಹಮ್ಮಿಕೊಳ್ಳಲಾಗಿತ್ತು. ದಿನಾಂಕ: 21/08/2020 ರಂದು ನಿರ್ದೇಶಕರು(**ISA**) ಮತ್ತು ಕಾರ್ಯನಿರ್ವಾಹಕ ಎಂಜಿನಿಯರ್(**EE**) ಇವರ ನೇತೃತ್ವದಲ್ಲಿ ನಡೆದ ಈ ತರಬೇತಿ ಕಾರ್ಯಕ್ರಮದಲ್ಲಿ ರಾಜ್ಯದ 8 ಜಿಲ್ಲೆಗಳ **ISA** ಗಳು ಮತ್ತು ಎಲ್ಲಾ ಜಿಲ್ಲಾ **IEC/HRD** ಸಮಾಲೋಚಕರುಗಳು, **UNICEF** ರಾಜ್ಯ ಸಂಯೋಜಕರು ಸೇರಿದಂತೆ ರಾಜ್ಯ ಕಚೇರಿಯ **IEC** ಸಮಾಲೋಚಕರು ಭಾಗಿಯಾಗಿದ್ದರು.

**ನೀರು – ನೈರ್ಮಲ್ಯ ಕುರಿತ ಸಮಸ್ಯೆಗಳಿಗೆ ಪರಿಹಾರ ಸಹಾಯವಾಣಿ 94809 85555 ಗೆ ಕರೆ ಮಾಡಿ.**